ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 847

ಸದಸ್ಯರ ಹೆಸರು : ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 20-09-2021

ಉತ್ತರಿಸುವ ಸಚಿವರು : ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ.	ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ಸುವರ್ಣ ಕನ್ನಡ ಸಮುಚ್ಚಯ ಭವನ ಕಾಮಗಾರಿ ಪೂರ್ಣಗೊಂಡಿದೆಯೇ;	ಕೊಡಗು ಜಿಲ್ಲೆ ಮಡಿಕೇರಿಯಲ್ಲಿ ಸುವರ್ಣ ಕನ್ನಡ ಸಮುಚ್ಚಯ ಭವನ ಕಾಮಗಾರಿ ಪ್ರಗತಿಯಲ್ಲಿದೆ.
ಆ.	ಸದರಿ ಕಾಮಗಾರಿ ಅನುಮೋದನೆಗೊಂಡ ವರ್ಷ ಯಾವುದು;	• 2006-07
ಇ.	ಸದರಿ ಕಾಮಗಾರಿಗೆ ಮಂಜೂರಾಗಿರುವ, ಬಿಡುಗಡೆಯಾಗಿರುವ ಹಾಗೂ ವಿನಿಯೋಗಿಸಿರುವ ಅನುದಾನದ ವಿವರಗಳೇನು?	• ಸರ್ಕಾರದ ಆದೇಶ ಸಂಖ್ಯೆ: ಸಂಕಇ 471 ಕಸಧ 2005, ದಿನಾಂಕ:15.03.2006ರ ಆದೇಶದನ್ವಯ ಸದರಿ ಸಮುಚ್ಚಯ ಭವನ ನಿರ್ಮಾಣ ಕಾಮಗಾರಿಗೆ ರೂ.107.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಮೊದಲನೇ ಕಂತಿನಲ್ಲಿ ರೂ.50.00 ಲಕ್ಷಗಳನ್ನು ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ, ಮಡಿಕೇರಿ ಇವರಿಗೆ ಬಿಡುಗಡೆ ಮಾಡಲಾಗಿದೆ. • ಸರ್ಕಾರದ ಆದೇಶ ಸಂಖ್ಯೆ: ಸಂಕಇ 471 ಕಸಧ 2005, ದಿನಾಂಕ:18.12.2006ರ ಆದೇಶದನ್ವಯ ಸದರಿ ಕಾಮಗಾರಿಗಾಗಿ ರೂ.150.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿ, ರೂ. 57.00 ಲಕ್ಷಗಳನ್ನು ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ, ಮಡಿಕೇರಿ ಇವರಿಗೆ ಬಿಡುಗಡೆ ಮಾಡಲಾಗಿದೆ. • ಸರ್ಕಾರದ ಆದೇಶ ಸಂಖ್ಯೆ: ಕಸಂವಾಪ್ರ 609 ಕಸಧ 2012, ದಿನಾಂಕ:24.05.2013ರ ಆದೇಶದನ್ವಯ ಸುವರ್ಣ ಕನ್ನಡ ಸಮುಚ್ಚಯ ಭವನ ನಿರ್ಮಾಣ ಕಾಮಗಾರಿಯ ಪರಿಷ್ಕೃತ ಅಂದಾಜು ಪಟ್ಟಿ ರೂ.400.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. • ಸರ್ಕಾರದ ಆದೇಶ ಸಂಖ್ಯೆ: ಕಸಂವಾ 197 ಕಸಧ 2017, ದಿನಾಂಕ:18.12.2017ರಲ್ಲಿ ಸದರಿ ಸುವರ್ಣ ಕನ್ನಡ ಸಮುಚ್ಚಯ ಭವನದ ಮುಂದುವರಿದ ಕಾಮಗಾರಿಗಳಿಗೆ ರೂ.200.00 ಲಕ್ಷಗಳನ್ನು ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ, ಮಡಿಕೇರಿ ಇವರಿಗೆ ಬಿಡುಗಡೆ ಮಾಡಲಾಗಿದೆ. • ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದಿಂದ ಸರ್ಕಾರದ ಆದೇಶ ಸಂಖ್ಯೆ: ಕಸಂವಾ 110 ಕೆಓಎಲ್ ಆಕ 2019, ದಿನಾಂಕ: 07.12.2019ರ ಆದೇಶದಲ್ಲಿ ಸದರಿ ಕಾಮಗಾರಿಗೆ ರೂ.500.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿ, ರೂ.500.00 ಲಕ್ಷಗಳನ್ನು ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ, ಮಡಿಕೇರಿ ಇವರಿಗೆ ಬಿಡುಗಡೆ ಮಾಡಲಾಗಿದೆ.

		• ಒಟ್ಟಾರೆಯಾಗಿ ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ಸುವರ್ಣ ಕನ್ನಡ ಸಮುಚ್ಚಯ ಭವನ ನಿರ್ಮಾಣ ಕಾಮಗಾರಿಗೆ ರೂ.900.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. • ಮಂಜೂರಾಗಿರುವ ಅನುದಾನದಲ್ಲಿ ರೂ.807.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. • ಬಿಡುಗಡೆಯಾಗಿರುವ ಅನುದಾನದಲ್ಲಿ ರೂ. 307.00 ಲಕ್ಷಗಳನ್ನು ವಿನಿಯೋಗಿಸಲಾಗಿದೆ. • ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದಿಂದ ಬಿಡುಗಡೆಯಾದ ಅನುದಾನ ರೂ.500.00 ಲಕ್ಷಗಳಲ್ಲಿ ಕಾಮಗಾರಿ ಕೈಗೊಳ್ಳಲು ದಿನಾಂಕ:11.12.2020ರಂದು ಜಿಲ್ಲಾಧಿಕಾರಿಯವರು ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ಮಡಿಕೇರಿ ಇವರಿಗೆ ಕಟ್ಟಡ ಕಾಮಗಾರಿಯನ್ನು ಕಾರ್ಯಗತಗೊಳಿಸಲು ಕ್ರಮ ಕೈಗೊಳ್ಳುವಂತೆ ತಿಳಿಸಿದ್ದು, ಲೋಕೋಪಯೋಗಿ ಇಲಾಖೆಯ ವತಿಯಿಂದ ಟೆಂಡರ್ ಪ್ರಕ್ರಿಯೆ ಕೈಗೊಂಡು ಕಾಮಗಾರಿ ಪ್ರಗತಿಯಲ್ಲಿದೆ.

ಕಡತ ಸಂಖ್ಯೆ: ಕಸಂವಾ 62 ಕವಿಸ 2021

(ವಿ. ಸುನಿಲ್ ಕುಮಾರ್)

ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು